ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು-560065
* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

ದಿನಾಂಕ: 11.12.2020

# ಚಿಕ್ಕಬಳ್ಳಾಪುರ ಜಿಲ್ಲೆಗೆ ಸೀಮಿತವಾಗಿದೆ

## ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)
## (ದಿನಾಂಕ 12-12-2020 ರಿಂದ 16-12-2020 ವರೆಗೆ)

| ನಿಯತಾಂಕಗಳು | 12.12.2020 | 13.12.2020 | 14.12.2020 | 15.12.2020 | 16.12.2020 |
|---|---|---|---|---|---|
| ಮಳೆ (ಮಿ ಮಿ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 27 | 27 | 27 | 27 | 27 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 15 | 15 | 14 | 14 | 14 |
| ಮೋಡ ( ಪ್ರಮಾಣ) | 2 | 2 | 2 | 3 | 0 |
| ಅರ್ದ್ರತೆ 7.20 ಬೆ (ಶೇ) | 88 | 88 | 87 | 87 | 87 |
| ಅರ್ದ್ರತೆ 2.20 ಮ (ಶೇ) | 82 | 82 | 80 | 80 | 80 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 3 | 2 | 2 | 3 | 3 |
| ಗಾಳಿಯ ದಿಕ್ಕು ( ಡಿಗ್ರಿ) | 135 | 135 | 79 | 103 | 90 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆ೦ಯಾಗುವ ಸಾಧ್ಯತೆ ಕಡಿಮೆ. ದಿನದ ಗರಿಷ್ಠ ಉಷ್ಣಾಂಶ 27.0$^{o}$ C ಮತ್ತು ಕನಿಷ್ಠ 14.0-15.0$^{o}$C ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **87-88 %** ಇದ್ದು ಮಧ್ಯಾಹ್ನ **80-82 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 2-3 ಕಿ.ಮೀ. ವೇಗದಲ್ಲಿ ಬೀಸುವ ಸ೦ಭವವಿದೆ.

- ಜೇಷ್ಠ ಮಳೆಯ ಕಾಲವು ಡಿಸೆಂಬರ್ ತಿಂಗಳ 03 ರಿಂದ ಡಿಸೆಂಬರ್ 15 ರವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 7.7 ಮಿ.ಮೀ. ವರೆಗೆ ಮಳೆಯಾಗುತ್ತದೆ.

## ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ /ಹಿಂಗಾರು ಬೆಳೆಗಳು | ➢ ಮುಂಗಾರು ಬೆಳೆಗಳ ಕಟಾವು ಮಾಡಲು ಸೂಕ್ತ ಕಾಲ ಮತ್ತು ಕಟಾವಾದ ರಾಗಿ, ಶೇಂಗಾ ಮತ್ತು ಮೆಕ್ಕೆಜೋಳ ಬೆಳೆಗಳನ್ನು ಬಿಸಿಲಿನಲ್ಲಿ ಒಣಗಿಸುವುದು, ಒಕ್ಕಣೆಯನ್ನು ಮಾಡಿ ಚೀಲದಲ್ಲಿ ಸೇಖರಿಸಿ.<br>➢ ರಾಗಿ ಬೆಳೆಯಲ್ಲಿ ತೆನೆಯನ್ನು ಕೋಯ್ಲು ಮಾಡಿ ಬಿಸಿಲಿನಲ್ಲಿ ಒಣಗಿಸಿ ಮತ್ತು ಕಳೆದ ವಾರದಲ್ಲಿ ಹೆಚ್ಚಾಗಿ ಮಳೆಯಾಗಿರುವುದರಿಂದ ಹಾಗು ಗಾಳಿಯಿಂದ ರಾಗಿಯು ಚಾಪೆಯ ಹಾಗೆ ನೆಲದಲ್ಲಿ ಬಿದ್ದಿರುವ ಕಾರಣ ಯಂತ್ರೋಪಕರಣವನ್ನು ಬಳಸದೆ ಕುಡುಗೋಲಿನಲ್ಲಿ ಕಟಾವು ಮಾಡಲು ತಿಳಿಸಲಾಗಿದೆ ಮತ್ತು ಕಟಾವಾದ ಬೆಳೆಗಳನ್ನು ಒಗ್ಗೂಡಿಸಿ ಮೆದೆಹಾಕುವುದು ಸೂಕ್ತ.<br>➢ ಮಾವಿನ ಮರಗಳ ಬುಡದ ಪಾತಿಗಳನ್ನು ಸ್ವಚ್ಚಗೊಳಿಸಿ ಲಾಂಟಾನ ಮುಂತಾದ ಕಳೆ ಸಸ್ಯಗಳಿದ್ದರೆ ಬೇರು ಸಮೇತ ಕಿತ್ತುತೆಗೆಯಬೇಕು.<br>**ಈ ಕೆಳಗಿನ ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>➢ ಅಲಸಂದೆ : ಟಿ.ವಿ.ಎಕ್ಸ್-944, ಕೆ.ಬಿ.ಸಿ-1, ಅವರೆ-ಎಚ್.ಎ-3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್-1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ-9 ಮತ್ತು ಕೆ.ಬಿ.ಎಚ್-1, ಹುಚ್ಚೆಳ್ಳು ತಳಿಗಳನ್ನು ಬಿತ್ತನೆ/ನಾಟಿ ಮಾಡುವುದು. |
| | **ಹೈನುಗಾರಿಕೆ** |
| ಪಶುಸಂಗೋಪನೆ | ➢ ತಾಪಮಾನದಲ್ಲಿ ಹಠಾತ್ ಕುಸಿತದಿಂದ ಪ್ರಾಣಿಗಳನ್ನು ರಕ್ಷಿಸಲು ರಾತ್ರಿಯ ಸಮಯದಲ್ಲಿ ಮುಚ್ಚಿದ ಶೆಡ್ ಪ್ರದೇಶದಲ್ಲಿ ಇರಿಸಿ.<br>➢ ಪ್ರಾಣಿಗಳ ಶೆಡ್‌ಗಳಲ್ಲಿನ ನೆಲ ಹಾಸು/ಹುಲ್ಲನ್ನು ಪ್ರತಿದಿನ ಬದಲಾಯಿಸಬೇಕು.<br>➢ ಕೆಲವು ಪ್ರದೇಶಗಳಲ್ಲಿ ಚಳಿಗಾಲದ ತಿಂಗಳುಗಳಲ್ಲಿ ಉಂಟಾಗುವ ಕೊರತೆಯ ಅವಧಿಗೆ ಮೇವನ್ನು ಸಂಗ್ರಹಿಸಲು ಸರಿಯಾದ ಕಾಳಜಿ ವಹಿಸಬೇಕು, ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಕತ್ತರಿಸಬೇಕು. |

| | |
|---|---|
| | ➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |
| **ಕೋಳಿ ಸಾಕಾಣಿಕಾ** | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಮೊಟ್ಟೆಯಿಂದ ಮರಿಗಳ ಬಂದ ನಂತರ ಮೊದಲನೇ ವಾರದಲ್ಲಿ ಶಾಖದ ಬುಟ್ಟಿಯ ಕೆಳಗೆ ಬಿಡಬೇಕು ಮತ್ತು ಶಾಖದ ಬುಟ್ಟಿಯ ಅಂಚಿನಲ್ಲಿ ನೆಲಕ್ಕೆ ಹರಡಿರುವ ಸತ್ತೆಯಿಂದ 8 ಸೆ.ಮೀ. ಮೇಲೆ $35^0$ ಸೆ. ಶಾಖ ಇರಬೇಕಾಗುತ್ತದೆ. ಅನಂತರ ವಾರಕ್ಕೆ $2^0$ ಸೆ. ನಂತೆ ಕಡಿಮೆ ಮಾಡಿ, ನಾಲ್ಕು ವಾರಗಳ ನಂತರ ಬಿಸಿ ಬುಟ್ಟಿಗಳನ್ನು ತೆಗೆಯಬೇಕು.<br>➢ ಚಳಿಗಾಲವಿರುವುದರಿಂದ ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಉಷ್ಣಾಂಶದ ಸ್ಥಿರತೆ ಕಾಪಾಡಲು ವಿದ್ಯುತ್ ಬಲ್ಬ್ ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುತ್ತದೆ.<br>➢ ಕೋಳಿ ಸಾಕಾಣಿಕಾ ಕೊಠಡಿಯಲ್ಲಿ ಕಿಟಕಿಯಲ್ಲಿ ಚಳಿಗಾಳಿಯು ಹೆಚ್ಚಾಗಿ ಬೀಸುವುದರಿಂದ ಪರದೆಯನ್ನು ಮುಚ್ಚಿ ಚಳಿಯಿಂದ ರಕ್ಷಿಸಬೇಕು. |
| **ರೇಷ್ಮೆ ಸಾಕಾಣಿಕೆ** | ➢ **ಸುಣ್ಣ ಕಟ್ಟು ರೋಗ:** ಈ ರೋಗವು ಸಾಮಾನ್ಯವಾಗಿ ಮಳೆಗಾಲ ಮತ್ತು ಚಳಿಗಾಲದಲ್ಲಿ ಕೆಲವು ಶಿಲೀಂಧ್ರಗಳ ಸೋಂಕಿನಿಂದ (ಬ್ಯುವೇರಿಯಾ ಬ್ಯಾಸಿಯಾನಾ) ಬರುತ್ತದೆ.<br>➢ ರೋಗವನ್ನು ಯಶಸ್ವಿಯಾಗಿ ನಿಯಂತ್ರಿಸಬೇಕಾದರೆ ಉಷ್ಣಾಂಶ ಮತ್ತು ತೇವಾಂಶವನ್ನು ಶಿಫಾರಸ್ಸು ಮಾಡಿದ ರೀತಿಯಲ್ಲಿ ಕಾಪಾಡಬೇಕು.<br>➢ ಜ್ವರಕ್ಕೆ ಕೂತಾಗ ಹಾಸಿಗೆಯನ್ನು ಲಘುವಾಗಿ ಹರಿದು ಸುಣ್ಣದ ಪುಡಿಯನ್ನು (5–6 ಗ್ರಾಂ/ಚದರ ಅಡಿಗೆ) ಧೂಳೀಕರಿಸುವುದನ್ನು ಮರೆಯಬಾರದು.<br>➢ ರೇಷ್ಮೆ ಸಾಕಾಣಿಕಾ ಘಟಕದಲ್ಲಿ ಕನಿಷ್ಠ ಉಷ್ಣಾಂಶವು $22^0$ ಸೆ. ಗಿಂತ ಕಡಿಮೆಯಾದಲ್ಲಿ ರೂಮ್ ಹೀಟರ್‌ಗಳ ಮುಖಾಂತರ ಸ್ಥಿರತೆಯನ್ನು ಕಾಪಾಡುವ್ಯದು ಅವಶ್ಯಕ.<br>➢ ಹಾಸಿಗೆಯನ್ನು ತೆಳುವಾಗಿಟ್ಟು ಹಳೆ ಹಾಸಿಗೆ ಒಣಗುವಂತೆ ಸುಣ್ಣವನ್ನು ಹಂತಕ್ಕೆ ತಕ್ಕಂತೆ ಸರಿ ಪ್ರಮಾಣದಲ್ಲಿ ಧೂಳೀಕರಿಸಿ ನೋಡಿಕೊಳ್ಳಬೇಕು.<br>➢ ಬಲೆಯನ್ನು ಬಳಸಿ ಹಾಸಿಗೆಯನ್ನು ಸ್ವಚ್ಛಗೊಳಿಸಬೇಕು ಮತ್ತು ರೋಗಗ್ರಸ್ಥ ಹುಳುಗಳನ್ನು ಆಯ್ದು ಮಣ್ಣಿನಲ್ಲಿ ಹೂತು ಹಾಕಿ ನಾಶಪಡಿಸಬೇಕು. ಸಾಕಾಣಿಕೆ ಮನೆ ಮತ್ತು ಅದರ ಸುತ್ತಲೂ ಶೇ.5ರ ಬ್ಲೀಚಿಂಗ್ ಪುಡಿ ಮತ್ತು ಸುಣ್ಣದ ಮಿಶ್ರಣವನ್ನು (1:19) ಧೂಳೀಕರಿಸಬೇಕು ಹಾಗೂ ವೈಯಕ್ತಿಕ ಶುಭ್ರತೆಯನ್ನು ಕಾಪಾಡಬೇಕು.<br>➢ ಕಾಲಕಾಲಕ್ಕೆ ಹಾಸಿಗೆ ಸೋಂಕು ನಿವಾರಕಗಳಾದ ಸುರಕ್ಷ, ವಿಜೇತ, ಅಂಕುಶ್, ಸಂರಕ್ಷಕ ಮುಂತಾದ ಔಷಧಿಗಳನ್ನು ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಧೂಳೀಕರಿಸುತ್ತಿರಬೇಕು ಮತ್ತು ರೋಗ ಕಾಣಿಸಿಕೊಂಡಾಗ ಹತೋಟಿ ಬರುವವರೆಗೂ ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ಸೋಂಕು ನಿವಾರಕಗಳನ್ನು ಬಳಸಬೇಕು. |


**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**